All India Radio: Bangalore
National Bulletin In Kannada
22.01.2026  07.35 a.m.

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
22.01.2026  07.35 a.m.

<><><><>

ಮುಖ್ಯಾಂಶಗಳು

1. ೨೦೩೦-೩೧ರವರೆಗೆ ಅಟಲ್ ಪಿಂಚಣಿ ಯೋಜನೆ ವಿಸ್ತರಣೆಗೆ ಕೇಂದ್ರ ಸರ್ಕಾರ ಅನುಮೋದನೆ
2. ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ: ಸುಪ್ರೀಂ ಕೋರ್ಟ್ ಆದೇಶ ಜಾರಿಗೆ ಚುನಾವಣಾ ಆಯೋಗ ನಿರ್ದೇಶನ
3. ಗ್ರೀನ್‌ಲ್ಯಾಂಡ್ ಹಿಡಿತಕ್ಕೆ ತೆಗೆದುಕೊಳ್ಳಲು ಬಲಪ್ರಯೋಗ ಮಾಡುವುದಿಲ್ಲ - ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ಪಷ್ಟನೆ
4. ಟಿ-೨೦ ಕ್ರಿಕೆಟ್: ನ್ಯೂಜಿಲೆಂಡ್ ವಿರುದ್ಧ ಭಾರತಕ್ಕೆ ೪೮ ರನ್‌ಗಳ ಭರ್ಜರಿ ಜಯ

<><><><>

ಕೇಂದ್ರ ಸರ್ಕಾರವು ೨೦೩೦-೩೧ರವರೆಗೆ ಅಟಲ್ ಪಿಂಚಣಿ ಯೋಜನೆಯನ್ನು ಮುಂದುವರಿಸಲು ಹಾಗೂ ಪ್ರಚಾರ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗೆ ಹಣಕಾಸು ಬೆಂಬಲವನ್ನು ವಿಸ್ತರಿಸಲು ಅನುಮೋದನೆ ನೀಡಿದೆ. ನವದೆಹಲಿಯಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿಯವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಯೋಜನೆಯು ಚಂದಾದಾರರ ಕೊಡುಗೆಯನ್ನು ಅವಲಂಬಿಸಿ, ೬೦ ವರ್ಷ ತುಂಬಿದ ನಂತರ ತಿಂಗಳಿಗೆ ಒಂದು ಸಾವಿರದಿಂದ ಐದು ಸಾವಿರ ರೂಪಾಯಿಗಳವರೆಗೆ ಖಾತರಿಪಡಿಸಿದ ಕನಿಷ್ಠ ಪಿಂಚಣಿಯನ್ನು ನೀಡುತ್ತದೆ. ಭಾರತದ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ಬ್ಯಾಂಕ್‌ಗೆ ಐದು ಸಾವಿರ ಕೋಟಿ ರೂಪಾಯಿಗಳ ಇಕ್ವಿಟಿ ಬೆಂಬಲವನ್ನು ಸಹ ಸಂಪುಟ ಅನುಮೋದಿಸಿದೆ. ಈ ಕ್ರಮವು ಸುಮಾರು ೧೫ ಲಕ್ಷ ೭೪ ಸಾವಿರ ಹೊಸ ಎಂಎಸ್‌ಎಂಇ ಫಲಾನುಭವಿಗಳಿಗೆ ಪ್ರಯೋಜನವನ್ನು ನೀಡುವ ನಿರೀಕ್ಷೆಯಿದೆ.

<><><><>

ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಸುಪ್ರೀಂ ಕೋರ್ಟ್‌ನ ಆದೇಶವನ್ನು ಜಾರಿಗೆ ತರಲು ಚುನಾವಣಾ ಆಯೋಗ ನಿರ್ದೇಶನಗಳನ್ನು ನೀಡಿದೆ. ಇದು ಹೆಸರುಗಳನ್ನು ಸಾರ್ವಜನಿಕವಾಗಿ ಪ್ರದರ್ಶಿಸುವುದನ್ನು ಕಡ್ಡಾಯಗೊಳಿಸುತ್ತದೆ ಹಾಗೂ ಬಾಧಿತ ಮತದಾರರಿಗೆ ದಾಖಲೆಗಳನ್ನು ಸಲ್ಲಿಸಲು ಮತ್ತು ನಿರ್ದಿಷ್ಟ ಸಮಯದೊಳಗೆ ವಿಚಾರಣೆಗೆ ಒಳಪಡುವ ಅವಕಾಶಗಳನ್ನು ಒದಗಿಸುತ್ತದೆ. ಪ್ರಸ್ತುತ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ ೨೦೨೬ ಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನ ಈ ತಿಂಗಳ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಆಯೋಗ, ಪಶ್ಚಿಮ ಬಂಗಾಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ. ಎಸ್‌ಐಆರ್ ಸಮಯದಲ್ಲಿ ಕಠಿಣ ಕಾನೂನು ಮತ್ತು ಸುವ್ಯವಸ್ಥೆಯನ್ನು ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗ, ಪಶ್ಚಿಮ ಬಂಗಾಳದ ಡಿಜಿಪಿ, ಕೋಲ್ಕತ್ತಾದ ಪೊಲೀಸ್ ಆಯುಕ್ತರು, ಎಲ್ಲಾ ಜಿಲ್ಲಾಧಿಕಾರಿಗಳು, ಎಲ್ಲಾ ಇತರ ಪೊಲೀಸ್ ಆಯುಕ್ತರು ಮತ್ತು ಎಲ್ಲಾ ಎಸ್‌ಪಿಗಳಿಗೆ ನಿರ್ದೇಶನ ನೀಡಿದೆ.

<><><><>

ದಾವೋಸ್‌ನಲ್ಲಿ ನಡೆದ ೨೦೨೬ ರ ವಿಶ್ವ ಆರ್ಥಿಕ ವೇದಿಕೆಯ ವಾರ್ಷಿಕ ಸಭೆಯಲ್ಲಿ ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ, ಉನ್ನತ ಮಟ್ಟದ ಸಭೆಗಳನ್ನು ನಡೆಸಿದರು. ಇದು ಕೈಗೆಟುಕುವ ಮತ್ತು ಎಲ್ಲರನ್ನೂ ಒಳಗೊಂಡ ಜಾಗತಿಕ ಇಂಧನ ಪರಿವರ್ತನೆಯನ್ನು ಮುನ್ನಡೆಸುವಲ್ಲಿ ಭಾರತದ ನಾಯಕತ್ವವನ್ನು ಒತ್ತಿಹೇಳಿತು. ವಿಶ್ವ ಆರ್ಥಿಕ ವೇದಿಕೆಯ ಅಧ್ಯಕ್ಷ ಮತ್ತು ಸಿಇಒ ಬೋರ್ಜ್ ಬ್ರೆಂಡೆ ಅವರೊಂದಿಗೆ ಪ್ರಲ್ಹಾದ್ ಜೋಶಿ ರಚನಾತ್ಮಕ ಚರ್ಚೆ ನಡೆಸಿದರು. ಹಂಚಿಕೆಯ ಆರ್ಥಿಕ ಮತ್ತು ಅಭಿವೃದ್ಧಿ ಸವಾಲುಗಳನ್ನು ಪರಿಹರಿಸುವಲ್ಲಿ ಜಾಗತಿಕ ಸಹಕಾರದ ಪ್ರಾಮುಖ್ಯತೆ, ಜಾಗತಿಕ ಒಮ್ಮತವನ್ನು ನಿರ್ಮಿಸುವಲ್ಲಿ ವಿಶ್ವ ಆರ್ಥಿಕ ವೇದಿಕೆಯಂತಹ ಬಹುಪಕ್ಷೀಯ ವೇದಿಕೆಗಳ ಪಾತ್ರ ಹಾಗೂ ಇಂಧನ ಮತ್ತು ಅಭಿವೃದ್ಧಿ ವಲಯಗಳನ್ನು ಒಳಗೊಂಡಂತೆ ಸುಸ್ಥಿರ, ಸ್ಥಿತಿಸ್ಥಾಪಕ ಮತ್ತು ಎಲ್ಲರನ್ನೂ ಒಳಗೊಂಡ ಬೆಳವಣಿಗೆಯನ್ನು ಮುನ್ನಡೆಸಲು ಸರ್ಕಾರಗಳು, ಕೈಗಾರಿಕೆಗಳು ಮತ್ತು ಪಾಲುದಾರರ ನಡುವೆ ನಿರಂತರ ಸಂವಾದದ ಅಗತ್ಯತೆಯ ಕುರಿತು ಉಭಯ ನಾಯಕರು ಚರ್ಚಿಸಿದರು. ಮನೆಗಳು ಮತ್ತು ರೈತರಿಗೆ ಶುದ್ಧ ಇಂಧನ ಪ್ರವೇಶವನ್ನು ವಿಸ್ತರಿಸುವ ಹಾಗೂ ವೆಚ್ಚವನ್ನು ಕಡಿಮೆ ಮಾಡುವ

ಮೇಲ್ಛಾವಣಿ ಸೌರಶಕ್ತಿ ಅಳವಡಿಕೆಗಾಗಿ ಪಿಎಂ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆ ಮತ್ತು ಸೌರಶಕ್ತಿ ಚಾಲಿತ ಕೃಷಿಗಾಗಿ ಪಿಎಂ-ಕುಸುಮ್‌ನಂತಹ ಭಾರತದ ಪ್ರಮುಖ ಉಪಕ್ರಮಗಳ ಕುರಿತು ಸಚಿವ ಪ್ರಲ್ಹಾದ್ ಜೋಶಿ ವಿವರಿಸಿದರು.

<><><><>

ಗ್ರೀನ್‌ಲ್ಯಾಂಡ್ ಅನ್ನು ತಮ್ಮ ಹಿಡಿತಕ್ಕೆ ತೆಗೆದುಕೊಳ್ಳಲು ಬಲಪ್ರಯೋಗ ಮಾಡುವುದಿಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಆದರೆ ಆರ್ಕ್ಟಿಕ್ ದ್ವೀಪವಾದ ಗ್ರೀನ್‌ಲ್ಯಾಂಡ್ ಮಾಲೀಕತ್ವವನ್ನು ಅಮೆರಿಕಗೆ ನೀಡಬೇಕೆಂಬ ತಮ್ಮ ಬೇಡಿಕೆಯನ್ನು ಪುನರುಚ್ಚರಿಸಿದ್ದಾರೆ. ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆ ಉದ್ದೇಶಿಸಿ ಮಾತನಾಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಗ್ರೀನ್‌ಲ್ಯಾಂಡ್ ಅನ್ನು ಸ್ವಾಧೀನಪಡಿಸಿಕೊಳ್ಳುವ ಬಗ್ಗೆ ಚರ್ಚಿಸಲು ತಕ್ಷಣದ ಮಾತುಕತೆಗಳನ್ನು ಬಯಸುವುದಾಗಿ ಹೇಳಿದರು. ಗ್ರೀನ್‌ಲ್ಯಾಂಡ್ ಅಮೆರಿಕದ ಮಿತ್ರ ರಾಷ್ಟ್ರವಾದ ಡೆನ್ಮಾರ್ಕ್‌ನ ಅರೆ ಸ್ವಾಯತ್ತ ಪ್ರದೇಶವಾಗಿದೆ. ೩೨ ನ್ಯಾಟೋ ದೇಶಗಳಲ್ಲಿ ಅಮೆರಿಕ ಮತ್ತು ಡೆನ್ಮಾರ್ಕ್ ಸೇರಿವೆ. ಡೆನ್ಮಾರ್ಕ್‌ನಿಂದ ಗ್ರೀನ್‌ಲ್ಯಾಂಡ್ ಅನ್ನು ಸ್ವಾಧೀನಪಡಿಸಿಕೊಳ್ಳುವ ವಿಚಾರವನ್ನು ಟ್ರಂಪ್ ಪದೇ ಪದೆ ಎತ್ತಿದ್ದಾರೆ. ೨೦೧೯ ರಲ್ಲಿ ಅಮೆರಿಕ ಅಧ್ಯಕ್ಷರಾಗಿ ತಮ್ಮ ಮೊದಲ ಅವಧಿಯಲ್ಲಿ ಈ ಕಲ್ಪನೆಯನ್ನು ಅವರು ಮಂಡಿಸಿದ್ದರು. ಈಗಾಗಲೇ ಮಿಲಿಟರಿ ನೆಲೆಯನ್ನು ನಿರ್ವಹಿಸುತ್ತಿರುವ ಅಮೆರಿಕದ ಭಾಗವಾಗಲು ಬಯಸುವುದಿಲ್ಲ ಎಂದು ಗ್ರೀನ್‌ಲ್ಯಾಂಡ್ ಸಮರ್ಥಿಸಿಕೊಂಡಿದೆ.

<><><><>

ಭಾರತ ತನ್ನ ಪರಮಾಣು ಇಂಧನ ಕಾರ್ಯಕ್ರಮದಲ್ಲಿ ನಿರ್ಣಾಯಕ ಬದಲಾವಣೆಯ ಹಂತದಲ್ಲಿದ್ದು, ಅತ್ಯುನ್ನತ ಸುರಕ್ಷತಾ ಮಾನದಂಡಗಳನ್ನು ಕಾಯ್ದುಕೊಳ್ಳುವುದರೊಂದಿಗೆ ಇಂಧನ ಭದ್ರತೆಯನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಸುಧಾರಣೆಗಳನ್ನು ಹೊಂದಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ಪತ್ರಕರ್ತರೊಂದಿಗೆ ಸಂವಾದ ನಡೆಸಿದ ಸಚಿವರು, ಇತ್ತೀಚೆಗೆ ಜಾರಿಗೆ ತಂದ ಪರಮಾಣು ಶಾಸನದ ಅಡಿಯಲ್ಲಿ ಸರ್ಕಾರವು ವಿವರವಾದ ನಿಯಮಗಳನ್ನು ರೂಪಿಸುವ ಪ್ರಕ್ರಿಯೆಯಲ್ಲಿದೆ ಎಂದು ತಿಳಿಸಿದರು. ಅಗತ್ಯ ಸುರಕ್ಷತಾ ಕ್ರಮಗಳಲ್ಲಿ ರಾಜಿ ಮಾಡಿಕೊಳ್ಳದೆ, ಖಾಸಗಿ ಪಾಲುದಾರರು ಸೇರಿದಂತೆ ಸರ್ಕಾರೇತರ ಭಾಗವಹಿಸುವಿಕೆಗೆ ಸರ್ಕಾರ ಪರಮಾಣು ವಲಯವನ್ನು

ತೆರೆಯುತ್ತಿದೆ ಎಂದು ಅವರು ಹೇಳಿದರು. ಆಡಳಿತ ಮತ್ತು ಸಾರ್ವಜನಿಕ ಕಲ್ಯಾಣಕ್ಕಾಗಿ ಬಾಹ್ಯಾಕಾಶ ತಂತ್ರಜ್ಞಾನದ ಬಳಕೆಯಲ್ಲಿ ಭಾರತದ ದೊಡ್ಡ ಶಕ್ತಿ ಅಡಗಿದೆ. ಹವಾಮಾನ ಬದ್ಧತೆಗಳು, ಕಾರ್ಯತಂತ್ರದ ಅಗತ್ಯಗಳು ಮತ್ತು ಆರ್ಥಿಕ ಬೆಳವಣಿಗೆಯನ್ನು ಪೂರೈಸಲು ದೇಶದ ದೀರ್ಘಕಾಲೀನ ಇಂಧನ ಮಿಶ್ರಣವು ನವೀಕರಿಸಬಹುದಾದ ಮತ್ತು ಪರಮಾಣು ಶಕ್ತಿಯನ್ನು ಸಮತೋಲನಗೊಳಿಸುತ್ತದೆ ಎಂದು ಸಚಿವ ಡಾ. ಜಿತೇಂದ್ರ ಸಿಂಗ್ ಪ್ರತಿಪಾದಿಸಿದರು.

<><><><>

ನವದೆಹಲಿಯಲ್ಲಿ ವಿಮಾನ ಸಾರಿಗೆ ಪೈಲಟ್ ಪರವಾನಗಿಗಾಗಿ ಎಲೆಕ್ಟ್ರಾನಿಕ್ ಸಿಬ್ಬಂದಿ ಪರವಾನಗಿ ಸೇವೆಗಳನ್ನು ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ ಪ್ರಾರಂಭಿಸಿದೆ. ಈ ಸಂದರ್ಭದಲ್ಲಿ ಮಾತನಾಡಿದ ನಾಗರಿಕ ವಿಮಾನಯಾನ ಮಹಾನಿರ್ದೇಶಕರು, ಇಪಿಎಲ್ ಉಪಕ್ರಮವು ಸುರಕ್ಷಿತ, ಆಧುನಿಕ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಡಿಜಿಟಲ್ ವ್ಯವಸ್ಥೆಗಳ ಮೂಲಕ ಭಾರತದ ನಾಗರಿಕ ವಿಮಾನಯಾನ ನಿಯಂತ್ರಕ ಪರಿಸರ ವ್ಯವಸ್ಥೆಯನ್ನು ಬಲಪಡಿಸುವ ಪ್ರಮುಖ ಹೆಜ್ಜೆಯಾಗಿದೆ ಎಂದು ಹೇಳಿದರು. ಎಲೆಕ್ಟ್ರಾನಿಕ್ ಸಿಬ್ಬಂದಿ ಪರವಾನಗಿಯು ದೃಢೀಕರಣವನ್ನು ಖಚಿತಪಡಿಸಿಕೊಳ್ಳಲು, ಟ್ಯಾಂಪರಿಂಗ್ ಅನ್ನು ತಡೆಯಲು ಮತ್ತು ನೈಜ-ಸಮಯದ ಪರಿಶೀಲನೆಯನ್ನು ಸಕ್ರಿಯಗೊಳಿಸಲು ಭದ್ರತಾ ವೈಶಿಷ್ಟ್ಯಗಳನ್ನು ಒಳಗೊಂಡಿರುವ ಸುರಕ್ಷಿತ ಡಿಜಿಟಲ್ ಪರವಾನಗಿಯಾಗಿದೆ.

<><><><>

ನಾಗ್ಪುರದ ವಿದರ್ಭ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐದು ಪಂದ್ಯಗಳ ಸರಣಿಯ ಮೊದಲ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ನ್ಯೂಜಿಲೆಂಡ್ ವಿರುದ್ಧ ಭಾರತ ೪೮ ರನ್‌ಗಳಿಂದ ಭರ್ಜರಿ ಜಯ ಗಳಿಸಿತು. ಈ ಗೆಲುವಿನೊಂದಿಗೆ, ಭಾರತ ತಂಡ ಐದು ಪಂದ್ಯಗಳ ಟಿ-೨೦ ಸರಣಿಯಲ್ಲಿ ೧-೦ ಅಂತರದ ಮುನ್ನಡೆ ಸಾಧಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೩೮ ರನ್ ಗಳಿಸಿತು. ಭಾರತದ ಪರ ಅಭಿಷೇಕ್ ಶರ್ಮ ೮೪, ರಿಂಕು ಸಿಂಗ್ ಔಟಾಗದೇ ೪೪ ರನ್ ಗಳಿಸಿದರು. ೨೩೯ ರನ್‌ಗಳ ಗುರಿಯನ್ನು ಬೆನ್ನಟ್ಟಿದ ನ್ಯೂಜಿಲೆಂಡ್, ನಿಗದಿತ ಇಪ್ಪತ್ತು ಓವರ್‌ಗಳಲ್ಲಿ ಏಳು ವಿಕೆಟ್‌ಗಳಿಗೆ ೧೯೦ ರನ್ ಗಳಿಸಲಷ್ಟೇ ಶಕ್ತವಾಯಿತು. ಗ್ಲೆನ್ ಫಿಲಿಪ್ಸ್ ೪೦ ಎಸೆತಗಳಲ್ಲಿ ೭೮ ರನ್ ಗಳಿಸಿದರು.

ಭಾರತದ ಪರ ವರುಣ್ ಚಕ್ರವರ್ತಿ ಮತ್ತು ಶಿವಂ ದುಬೆ ತಲಾ ಎರಡು ವಿಕೆಟ್ ಪಡೆದರೆ, ಅರ್ಶ್‌ದೀಪ್ ಸಿಂಗ್, ಹಾರ್ದಿಕ್ ಪಾಂಡ್ಯ ಮತ್ತು ಅಕ್ಷರ್ ಪಟೇಲ್ ತಲಾ ಒಂದು ವಿಕೆಟ್ ಪಡೆದರು.

<><><><>

ಇಂಡೋನೇಷ್ಯಾದಲ್ಲಿ ನಡೆಯುತ್ತಿರುವ ಇಂಡೋನೇಷ್ಯಾ ಮಾಸ್ಟರ್ಸ್ ೨೦೨೬ ಬ್ಯಾಡ್ಮಿಂಟನ್ ಪಂದ್ಯದಲ್ಲಿ, ಇಂದು ಭಾರತೀಯ ಶಟ್ಲರ್‌ಗಳು ೧೬ ರ ಸುತ್ತಿನಲ್ಲಿ ಸ್ಪರ್ಧಿಸಲಿದ್ದಾರೆ. ಪುರುಷರ ಸಿಂಗಲ್ಸ್‌ನಲ್ಲಿ, ಲಕ್ಷ್ಯ ಸೇನ್, ಹಾಂಗ್‌ಕಾಂಗ್‌ನ ಜೇಸನ್ ಗುಣವಾನ್ ಅವರನ್ನು ಎದುರಿಸಲಿದ್ದಾರೆ, ಇದೇ ವೇಳೆ, ಕಿಡಂಬಿ ಶ್ರೀಕಾಂತ್, ಚೈನೀಸ್ ತೈಪೆಯ ಚೌ ಟಿಯೆನ್ - ಚೆನ್ ಅವರ ವಿರುದ್ಧ ಸೆಣಸಲಿದ್ದಾರೆ. ಮಹಿಳಾ ಸಿಂಗಲ್ಸ್‌ನಲ್ಲಿ, ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು ಡೆನ್ಮಾರ್ಕ್‌ನ ಲೈನ್ ಕ್ಜಾರ್ಸ್‌ಫೆಲ್ಡ್ಟ್ ಅವರನ್ನು ಎದುರಿಸಲಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ, ಅರ್ಜುನ್ ಮದತಿಲ್ ರಾಮಚಂದ್ರನ್ ಮತ್ತು ಹರಿಹರನ್ ಅಮ್ಸಕರುಣನ್ ಜೋಡಿಯು ಮಲೇಷ್ಯಾದ ಟೀ ಕೈ ವುನ್ ಮತ್ತು ಮನ್ ವೀ ಚೊಂಗ್ ವಿರುದ್ಧ ಸೆಣಸಲಿದೆ.

<><><><>

ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿ, ಯುಪಿ ವಾರಿಯರ್ಸ್, ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭:೩೦ ಕ್ಕೆ ಪ್ರಾರಂಭವಾಗಲಿದೆ.

<><><><>

೨೦೨೬ ರ ಗಣರಾಜ್ಯೋತ್ಸವದ ಅಂಗವಾಗಿ ಆಯೋಜಿಸಲಾದ ರಾಷ್ಟ್ರೀಯ ಶಾಲಾ ಬ್ಯಾಂಡ್ ಸ್ಪರ್ಧೆಯು ವಲಯ ಮಟ್ಟದಲ್ಲಿ ಮುಕ್ತಾಯಗೊಂಡಿದೆ. ಇದೇ ೨೪ ರಂದು ನವದೆಹಲಿಯ ರಾಷ್ಟ್ರೀಯ ಬಾಲ ಭವನದಲ್ಲಿ ನಡೆಯುವ ಗ್ರ್ಯಾಂಡ್ ಫಿನಾಲೆಯಲ್ಲಿ ೧೬ ತಂಡಗಳು ಪ್ರದರ್ಶನ ನೀಡಲಿವೆ. ಪೂರ್ವ, ಪಶ್ಚಿಮ, ಉತ್ತರ ಮತ್ತು ದಕ್ಷಿಣ ಎಂಬ ನಾಲ್ಕು ವಿಭಾಗಗಳಲ್ಲಿ ಪ್ರತಿ ವಲಯದಿಂದ ನಾಲ್ಕು ತಂಡಗಳನ್ನು ಆಯ್ಕೆ ಮಾಡಲಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ೧೬ ತಂಡಗಳು ಗ್ರ್ಯಾಂಡ್ ಫಿನಾಲೆಯಲ್ಲಿ ಸ್ಪರ್ಧಿಸಲಿವೆ. ಇದನ್ನು ದೇಶಾದ್ಯಂತ ಶಾಲಾ ಮಕ್ಕಳಲ್ಲಿ ದೇಶಭಕ್ತಿ ಮತ್ತು ಏಕತೆಯ ಮನೋಭಾವ ಬೆಳೆಸುವ ಉದ್ದೇಶದಿಂದ ಆಯೋಜಿಸಲಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>